ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ, ದಿನಾಂಕ: 18ನೇ ಜುಲೈ, 2019

ಮಾನ್ಯತೆ ಪಡೆದ ಪತ್ರಕರ್ತರ ಮಕ್ಕಳ ವಿದ್ಯಾಭ್ಯಾಸದ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):-

349 (365) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನೆರೆಯ ರಾಜ್ಯವಾದ ತೆಲಂಗಾಣದ ಸಂಗಾರೆಡ್ಡಿ ಜಿಲ್ಲೆಯಲ್ಲಿ ಖಾಸಗಿ ಶಾಲೆಗಳಲ್ಲಿ ಪತ್ರಕರ್ತರ ಮಕ್ಕಳಿಗೆ ಶೇ.50 ರಷ್ಟು ಶುಲ್ಕ ವಿನಾಯಿತಿ ನೀಡುವಂತೆ ಆದೇಶವಾದಂತೆ ನಮ್ಮ ರಾಜ್ಯದಲ್ಲಿಯೂ ಮಾನ್ಯತೆ ಪಡೆದ ಪತ್ರಕರ್ತರಿಗೆ ಇಂತಹ ಸೌಲಭ್ಯ ಒದಗಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವಾಗ ಒದಗಿಸಲಾಗುವುದು, ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು ;

(ಆ) ಬೇರೆ-ಬೇರೆ ರಾಜ್ಯಗಳ ಪತ್ರಿಕೆಗಳಾದ ಉರ್ದು, ತೆಲುಗು, ಮರಾಠಿ ಪತ್ರಿಕೆಗಳನ್ನು ಓದುವ ಜನರು ಕರ್ನಾಟಕ ರಾಜ್ಯದಲ್ಲಿದ್ದು, ಇಂತಹ ಪತ್ರಿಕೆಗಳಿಗೆ ರಾಜ್ಯದ ಯೋಜನೆಗಳ ಬಗ್ಗೆ ಜಾಹೀರಾತು ಹೊರಡಿಸಲು ಅವಕಾಶ ನೀಡದಿರಲು ಕಾರಣವೇನು ; ಅವಕಾಶ ನೀಡುವುದಾದರೆ ಯಾವ ಕಾಲಮಿತಿಯೊಳಗೆ ನೀಡಲಾಗುವುದು;

(ಇ) ಕರ್ನಾಟಕದಲ್ಲಿ ಕನ್ನಡ, ಉರ್ದು, ಮರಾಠಿ, ತೆÀಲುಗು ಪತ್ರಿಕೆಗಳ ಪ್ರಸಾರವಿದ್ದು, ಈ ಪತ್ರಿಕೆಗಳ ವರದಿಗಾರರಿಗೆ ನಿವೇಶನ ಸೌಲಭ್ಯಗಳನ್ನು ಕಲ್ಪಿಸುವ ವಿಚಾರ ಸರ್ಕಾರದ ಮುಂದಿದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು ;

(ಈ) ಕರ್ನಾಟಕದಲ್ಲಿ ಪ್ರಸಾರವಾಗುತ್ತಿರುವ ಕನ್ನಡ, ಉರ್ದು, ಮರಾಠಿ, ತೆಲುಗು, ಇಂಗ್ಲೀಷ್ ಪತ್ರಿಕೆಗಳ ಎಷ್ಟು ವರದಿಗಾರರಿಗೆ ಮಾನ್ಯತೆ ನೀಡಲಾಗಿದೆ ? (ವಿವರವಾದ ಮಾಹಿತಿ ನೀಡುವುದು)